ಕರ್ನಾಟಕ ಸರ್ಕಾರ
(ಕೃಷಿ ಇಲಾಖೆ)

ಸಂಖ್ಯೆ:ಜಕೃನಿ(ಬೆವಿ)/KH-19/L&MSA claim/2020-21/ 20

ಕೃಷಿ ಆಯುಕ್ತಾಲಯ,
ಶೇಷಾದ್ರಿರಸ್ತೆ, ಬೆಂಗಳೂರು–1,
ದಿನಾಂಕ:10.08.2020.

## ಸುತ್ತೋಲೆ

**ವಿಷಯ:** ನೆರೆ/ಪ್ರವಾಹ ಗಳಿಂದ ಬೆಳೆ ಹಾನಿ ಆಗಿರುವ ಪ್ರದೇಶದಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯ ಬೆಳೆ ವಿಮೆ ನೋಂದಾಯಿಸಿದ ರೈತರಿಗೆ ಸೂಕ್ತ ಪರಿಹಾರವನ್ನು ವಿಮಾ ಕಂಪನಿಗಳಿಂದ ಇತ್ಯರ್ಥಪಡಿಸುವ ಬಗ್ಗೆ.

**ಉಲ್ಲೇಖ:** 1. ಸರ್ಕಾರದ ಅಧಿಸೂಚನೆ ಸಂಖ್ಯೆ: ಕೃಇ 78 ಕೃಕೈಉ 2020, ದಿನಾಂಕ:06–06–2020 & 22–06–2020
2. ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯ ಪರಿಷ್ಕೃತ ಮಾರ್ಗಸೂಚಿಗಳು.

- - -

ಮೇಲ್ಕಾಣಿಸಿದ ವಿಷಯ ಮತ್ತು ಉಲ್ಲೇಖ ದನ್ವಯ, ಮುಂಗಾರು 2020 ನೇ ಸಾಲಿನಲ್ಲಿ ಇತ್ತೀಚೆಗೆ ಉಂಟಾದ ನೆರೆ/ಪ್ರವಾಹ ಗಳಿಂದ ಬೆಳೆ ಹಾನಿ ಉಂಟಾಗಿರುವುದು ತಮಗೆ ತಿಳಿದಿರುವ ವಿಷಯವಾಗಿದೆ. ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯಡಿ ನೋಂದಾಯಿಸಿದ ರೈತರಿಗೆ ವಿಮಾ ಪರಿಹಾರ ಇತ್ಯರ್ಥಪಡಿಸಲು On account payment due to Midseason Adversity ಅಡಿ ಅವಕಾಶವಿರುತ್ತದೆ. ಮುಂದಿನ ಸಾಲು/ಹಂಗಾಮುಗಳಲ್ಲಿ ಈ ರೀತಿಯ ಸನ್ನಿವೇಶಗಳು ಉಂಟಾದಲ್ಲಿ ಈ ಸುತ್ತೋಲೆಯಲ್ಲಿ ವಿವರಿಸಿದಂತೆ ಕ್ರಮ ಕೈಗೊಳ್ಳಲು ತಿಳಿಸಿದೆ.

ಉಲ್ಲೇಖಿತ(1)ರ ಸರ್ಕಾರದ ಅಧಿಸೂಚನೆಯ ಕಂಡಿಕೆ ಸಂಖ್ಯೆ (27) ರಲ್ಲಿ "ಅಧಿಸೂಚಿತ ಘಟಕದಲ್ಲಿ ಸಂಭವಿಸುವ ಹವಾಮಾನ ವೈಪರೀತ್ಯಗಳಾದ ಹೆಚ್ಚಿನ ಮಳೆ, ನೆರೆ/ಪ್ರವಾಹಗಳಿಂದ ಬೆಳೆ ಮುಳುಗಡೆ, ದೀರ್ಘಕಾಲದ ತೇವಾಂಶ ಕೊರತೆ (prolonged dry spell), ತೀವ್ರ ಬರಗಾಲ ಮುಂತಾದವುಗಳಿಂದ ಯಾವುದೇ ಅಧಿಸೂಚಿತ ವಿಮಾ ಘಟಕದಲ್ಲಿ ಬಿತ್ತನೆಯಾದ ನಂತರ ಕಟಾವಿಗೆ ಮೊದಲು (On account payment due to Midseason Adversity), ನಿರೀಕ್ಷಿತ ಇಳುವರಿಯು ಪ್ರಾರಂಭಿಕ ಇಳುವರಿಯ ಶೇಕಡ 50 ಕ್ಕಿಂತ ಕಡಿಮೆ ಇದ್ದರೆ, ವಿಮೆ ಮಾಡಿಸಿದ ರೈತರಿಗೆ ಅಂದಾಜು ಮಾಡಲಾದ ಬೆಳೆ ವಿಮಾ ನಷ್ಟ ಪರಿಹಾರದಲ್ಲಿ ಶೇಕಡಾ 25ರಷ್ಟು ಹಣವನ್ನು ಮುಂಚಿತವಾಗಿ ವಿಮಾ ಸಂಸ್ಥೆಯು ನೀಡತಕ್ಕದ್ದು. ಬೆಳೆ ಕಟಾವು ಪ್ರಯೋಗಗಳ ಆಧಾರದ ಮೇಲೆ ಬೆಳೆ ಇಳುವರಿ ಮಾಹಿತಿ ಬಂದನಂತರ ಅಂತಿಮ ಬೆಳೆ ವಿಮಾ ನಷ್ಟ

ಪರಿಹಾರದಲ್ಲಿ ಈ ಹಣವನ್ನು ಹೊಂದಾಣಿಕೆ ಮಾಡತಕ್ಕದ್ದು. ಈ ಬಗ್ಗೆ ವರದಿಯನ್ನು ನೀಡಲು ಜಿಲ್ಲೆಯ ಜಿಲ್ಲಾಧಿಕಾರಿಯವರು ನೋಡಲ್ ಅಧಿಕಾರಿಯನ್ನಾಗಿ ನೇಮಿಸಿದೆ." ಎಂದು ತಿಳಿಸಲಾಗಿರುತ್ತದೆ.

ಅದೇ ರೀತಿಯಾಗಿ ಸರ್ಕಾರದ ಅಧಿಸೂಚನೆಯ ಕಂಡಿಕೆ ಸಂಖ್ಯೆ (25) ರಲ್ಲಿ " ಪ್ರಸಕ್ತ ಸಾಲು ಮತ್ತು ಹಂಗಾಮಿನಲ್ಲಿ ಮಳೆ ಅಭಾವ ಅಥವಾ ಇತರೆ ಪ್ರತಿಕೂಲ ಹವಾಮಾನ ಪರಿಸ್ಥಿತಿಗಳಿಂದ ಅಧಿಸೂಚಿತ ಘಟಕದಲ್ಲಿ ಶೇಕಡಾ 75ಕ್ಕಿಂತ ಹೆಚ್ಚಿನ ಕ್ಷೇತ್ರದಲ್ಲಿ ಬಿತ್ತನೆ ವಿಫಲಗೊಂಡಲ್ಲಿ (Prevented sowing/Planting Risk) ವಿಮಾ ಮೊತ್ತದ ಗರಿಷ್ಟ ಶೇಕಡಾ 25ರಷ್ಟು ಪರಿಹಾರವನ್ನು ವಿಮಾ ಸಂಸ್ಥೆಯು ವಿಮೆ ಮಾಡಿಸಿದ ರೈತರಿಗೆ ಇತ್ಯರ್ಥಪಡಿಸಿ ಮುಂದಿನ ಅವಧಿಗೆ ವಿಮೆಯನ್ನು ರದ್ದುಪಡಿಸತಕ್ಕದ್ದು. ಈ ಸಂಬಂಧ ಬಿತ್ತನೆ ಕ್ಷೇತ್ರದ ವರದಿಯನ್ನು ಘೋಷಿಸಲು ಜಿಲ್ಲೆಗಳ ಜಿಲ್ಲಾಧಿಕಾರಿಯವರನ್ನು ಹಾಗೂ ಮಳೆ ಮತ್ತು ಇತರೆ ಕೃಷಿ ಹವಾಮಾನದ ವರದಿಯನ್ನು ನೀಡಲು ನಿರ್ದೇಶಕರು, ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ, ಬೆಂಗಳೂರು ಇವರನ್ನು ನೋಡಲ್ ಅಧಿಕಾರಿಗಳನ್ನಾಗಿ ನೇಮಿಸಲಾಗಿದೆ. ಸದರಿ ವರದಿಯನ್ನು ಅನುಬಂಧ-V ರಲ್ಲಿ ನೀಡಲಾಗಿರುವ Prevented sowing Invoke ಮಾಡುವ ಕೊನೆಯ ದಿನಾಂಕದ 7 ದಿನಗಳು ಮುಂಚಿತವಾಗಿ ಕೃಷಿ ಇಲಾಖೆ ಕೇಂದ್ರ ಕಚೇರಿಗೆ ನಿಗದಿತ ನಮೂನೆಯಲ್ಲಿ ಸಲ್ಲಿಸತಕ್ಕದ್ದು." ಎಂದು ತಿಳಿಸಲಾಗಿರುತ್ತದೆ.

ಸದರಿ ಅಧಿಸೂಚನೆಯನ್ವಯ ನೋಡಲ್ ಅಧಿಕಾರಿಯವರಾದ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಕೆಳಕಂಡಂತೆ ಜಿಲ್ಲಾ ಮಟ್ಟದ ಸಮಿತಿ ರಚಿಸಿ "Prevented sowing risk" ಅಥವಾ "On account payment due to Midseason Adversity" invoke ಮಾಡಲು ಕ್ರಮ ಕೈಗೊಳ್ಳಲು ತಿಳಿಸಿದೆ.

ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ಜಂಟಿ ಸಮಿತಿಯನ್ನು ಕೆಳಕಂಡ ಸದಸ್ಯರನ್ನೊಳಗೊಂಡು ರಚಿಸಬೇಕು.

- ಉಪ ಕಾರ್ಯದರ್ಶಿಗಳು (ಅಭಿವೃದ್ಧಿ) ಜಿಲ್ಲಾ ಪಂಚಾಯತ್
- ಜಿಲ್ಲೆಯ ಜಂಟಿ ಕೃಷಿ ನಿರ್ದೇಶಕರು – ಸದಸ್ಯ ಕಾರ್ಯದರ್ಶಿ
- ಜಿಲ್ಲಾ ತೋಟಗಾರಿಕೆ ಉಪ ನಿರ್ದೇಶಕರು
- ಜಿಲ್ಲಾ ಸಾಂಖ್ಯಿಕ ಸಂಗ್ರಹಣಾಧಿಕಾರಿಗಳು.
- ಜಿಲ್ಲಾ ಅಗ್ರಣೀಯ ಬ್ಯಾಂಕ್ ವ್ಯವಸ್ಥಾಪಕರು
- ಸ್ಥಳೀಯವಾಗಿ ಲಭ್ಯವಿರುವ ಹವಾಮಾನ ತಜ್ಞರು
- ಕೃಷಿ ವಿಜ್ಞಾನ ಕೇಂದ್ರದ ಅಥವಾ ಕೃಷಿ ವಿಶ್ವ ವಿದ್ಯಾಲಯದ ಪ್ರತಿನಿದಿಗಳು
- ಸಂಬಂಧಿಸಿದ ಅನುಷ್ಠಾನ ವಿಮಾ ಕಂಪನಿಗಳ ಪ್ರತಿನಿದಿಗಳು
- ಜಿಲ್ಲಾಧಿಕಾರಿಗಳು ಸೂಚಿಸುವ ಇತರೆ ತಜ್ಞರು/ ರೈತ ಪ್ರತಿನಿಧಿಗಳು.

ಸರ್ಕಾರದ ಅಧಿಸೂಚನೆಯ ಕಂಡಿಕೆ ಸಂಖ್ಯೆ (31) ರಲ್ಲಿ ವಿವರಿಸಿರುವಂತೆ ಜಿಲ್ಲಾ ಮಟ್ಟದ ಜಂಟಿ ಸಮಿತಿಗೆ ರೈತ ಪ್ರತಿನಿಧಿಗಳನ್ನು ಸಭೆಯ ಸದಸ್ಯರುಗಳನ್ನಾಗಿ ನೇಮಕ ಮಾಡಲು ತಕ್ಷಣದಿಂದ ಜಾರಿಗೆ ಬರುವಂತೆ ಈ ಕೆಳಕಂಡ 3 ಅಂಶಗಳನ್ನು ಸೇರ್ಪಡೆಗೊಳಿಸಿ ಕ್ರಮವಹಿಸಲು ಸೂಚಿಸಿದೆ.

- ಜಿಲ್ಲಾಧಿಕಾರಿಗಳು ರೈತ ಪ್ರತಿನಿಧಿಗಳನ್ನು ಸಮಿತಿಯ ಸದಸ್ಯರನ್ನಾಗಿ ಆಯ್ಕೆ ಮಾಡುವಾಗ ಜಿಲ್ಲಾ ಉಸ್ತುವಾರಿ ಮಂತ್ರಿಗಳ ಅನುಮೋದನೆ ಮೇರೆಗೆ ಆಯ್ಕೆ ಮಾಡುವುದು.
- ಈ ರೀತಿ ಆಯ್ಕೆಯಾದ ರೈತ ಪ್ರತಿನಿಧಿಗಳ ಸದಸ್ಯತ್ವವು ಆಯ್ಕೆಯಾದ ದಿನಾಂಕದಿಂದ ಒಂದು ವರ್ಷದ ಅವಧಿಗೆ ಮಾತ್ರ ಚಾಲ್ತಿಯಲ್ಲಿರುತ್ತದೆ.
- ಆಯ್ಕೆಯ ಅವಧಿ ಕೊನೆಯಾದ ನಂತರ ಹೊಸದಾಗಿ ಸದಸ್ಯರನ್ನು ಮೇಲೆ ತಿಳಿಸಿದಂತೆ ನೇಮಕ ಮಾಡುವುದು.

ಸದರಿ ಸಮಿತಿಯು ಹವಾಮಾನ ವೈಪರಿತ್ಯಗಳಿಂದ/ಪ್ರಕೃತಿ ವಿಕೋಪಗಳಿಂದ ಬೆಳೆ ಹಾನಿ ಉಂಟಾದಲ್ಲಿ ಅವಶ್ಯಕತೆಗೆ ತಕ್ಕಂತೆ "Prevented sowing risk" ಅಥವಾ "On account payment due to Midseason Adversity" invoke ಮಾಡಲು ನಿರ್ಧಾರ ಕೈಗೊಳ್ಳುವುದು.

"On account payment due to Midseason Adversity" invoke ಮಾಡಲು ಕೆಳಕಂಡ ಮಾರ್ಗಸೂಚಿಗಳ ಪ್ರಮುಖ ಅಂಶಗಳನ್ನು (Para no. 21.2 of Revised Operational Guidelines) ಗಮನದಲ್ಲಿರಿಸಿಕೊಳ್ಳಬೇಕು.

1. ಬೆಳೆಯು ಬಿತ್ತನೆಯಾಗಿ ಒಂದು ತಿಂಗಳು ಆಗಿರಬೇಕು (more than one month old crop) ಮತ್ತು ಬೆಳೆ ಕಟಾವಿಗಿಂತ 15 ದಿನಕ್ಕಿಂತ ಮುಂಚಿತವಾಗಿರಬೇಕು.
2. ಮೇಲೆ ತಿಳಿಸಿರುವ ಯಾವುದೇ ಹವಾಮಾನ ವೈಪರಿತ್ಯಗಳು ಉಂಟಾದ 7 ದಿನಗಳೊಳಗೆ ಮೇಲಿನ ಸಮಿತಿಯು ಸಭೆ ಆಯೋಜಿಸಬೇಕು.
3. ಒಂದು ವಿಮಾ ಘಟಕದಲ್ಲಿ ಶೇಕಡ 5 ರಷ್ಟು ಬಿತ್ತನೆ ಕ್ಷೇತ್ರದಲ್ಲಿ 10 ವಿವಿಧ ಅನಿಯಿತ ಸ್ಥಳಗಳಲ್ಲಿ (randomnly spread over locations) ನಷ್ಟದ ಮೌಲ್ಯಮಾಪನವನ್ನು ಸಭೆ ಆಯೋಜಿಸಿದ 7 ದಿನಗಳೊಳಗೆ ಮಾಡುವುದು.
4. ನಿಗಧಿತ ನಮೂನೆಯಲ್ಲಿ (ಲಗತ್ತಿಸಿದೆ) ನಷ್ಟದ ಮೌಲ್ಯಮಾಪನ ಮಾಡಿದ ಒಂದು ದಿನದಲ್ಲಿ ವರದಿಯನ್ನು ಕೇಂದ್ರ ಕಚೇರಿಗೆ ಸಲ್ಲಿಸುವುದು.

"Prevented sowing risk" invoke ಮಾಡಲು Para no. 21.3 of Revised Operational Guidelines ಮಾರ್ಗಸೂಚಿಗಳ ಪ್ರಮುಖ ಅಂಶಗಳನ್ನು ಗಮನದಲ್ಲಿರಿಸಿ ಕ್ರಮ ಕೈಗೊಳ್ಳಲು ಸೂಚಿಸಿದೆ.

ಜಿಲ್ಲಾ ಮಟ್ಟದ ಜಂಟಿ ಸಮಿತಿ ಸಭೆಯ ತೀರ್ಮಾನದಂತೆ ಹಾಗೂ Revised Operational Guidelines ಮಾರ್ಗಸೂಚಿಗಳ ಅಂಶಗಳನ್ನು ಗಮನದಲ್ಲಿರಿಸಿ ಕ್ರಮ ಕೈಗೊಳ್ಳಲು ಸೂಚಿಸಿದೆ.

ಸರ್ಕಾರದ ಅಧಿಸೂಚನೆ ಕಂಡಿಕೆ ಸಂಖ್ಯೆ (35) ರಲ್ಲಿ ಸೂಚಿಸಿದಂತೆ _Localized calamity ಗೆ ಸಂಬಂಧಿಸಿದಂತೆ ಈ ಕೆಳಗಿನಂತೆ ಕ್ರಮ ಕೈಗೊಳ್ಳಲು ತಿಳಿಸಿದೆ.

- ಸ್ಥಳ ನಿರ್ದಿಷ್ಟ ಪ್ರಕೃತಿ ವಿಕೋಪಗಳಾದ (Localized calamity) ಆಲೀಕಲ್ಲು ಮಳೆ, ಭೂ ಕುಸಿತ, ಬೆಳೆ ಮುಳುಗಡೆ (ಇನಂಡೇಷನ್), ಮೇಘಸ್ಫೋಟ (Cloud burst) ಮತ್ತು ಗುಡುಗು–ಮಿಂಚುಗಳಿಂದಾಗಿ ಉಂಟಾಗುವ ಬೆಂಕಿ ಅವಘಡ (Natural fire due to lightning) ಗಳಿಂದ ಉಂಟಾಗುವ ನಷ್ಟದ ನಿರ್ಧರಣೆಯನ್ನು ವೈಯುಕ್ತಿಕವಾಗಿ ನಿರ್ಧರಿಸಿ ಬೆಳೆ ವಿಮಾ ನಷ್ಟ ಪರಿಹಾರವನ್ನು ಇತ್ಯರ್ಥಪಡಿಸಲು ಯೋಜನೆಯಡಿ ಅವಕಾಶವಿರುತ್ತದೆ.
- ಒಂದು ವೇಳೆ ಒಂದು ಅಧಿಸೂಚಿತ ಘಟಕದಲ್ಲಿ ಶೇಕಡಾ 25 ಕ್ಕಿಂತ ಹೆಚ್ಚು ವಿಸ್ತೀರ್ಣದಲ್ಲಿ ಬೆಳೆ ನಷ್ಟವಾದರೆ ಆ ಅಧಿಸೂಚಿತ ಘಟಕದಲ್ಲಿ ಬೆಳೆ ವಿಮೆಗೆ ಒಳಪಟ್ಟ ರೈತರಲ್ಲಿ ಬೆಳೆ ನಷ್ಟವಾದ ರೈತರಿಗೆ ಮಾತ್ರ ಮಾದರಿ ಸಮೀಕ್ಷೆಗನುಗುಣವಾಗಿ ಬೆಳೆ ವಿಮಾ ನಷ್ಟ ಪರಿಹಾರವನ್ನು ಇತ್ಯರ್ಥಪಡಿಸತಕ್ಕದ್ದು.
- ಇಂತಹ ಸ್ಥಳೀಯ ಗಂಡಾಂತರಗಳ ಕಾರಣದಿಂದ ಬೆಳೆ ನಷ್ಟ ಸಂಭವಿಸಿದರೆ, ಬೆಳೆ ವಿಮೆ ಮಾಡಿಸಿರುವ ರೈತರು ಈ ಬಗ್ಗೆ ನೇರವಾಗಿ ಸಂಬಂಧಪಟ್ಟ ಅನುಷ್ಠಾನಗೊಳಿಸುವ ವಿಮಾಸಂಸ್ಥೆಗಳ ಕಛೇರಿಗಳಿಗೆ ಅಥವಾ ಹಣಕಾಸು ಸಂಸ್ಥೆ ಅಥವಾ ಕೃಷಿ/ತೋಟಗಾರಿಕೆ ಇಲಾಖೆ ಮೂಲಕ ತಕ್ಷಣ ಸೂಚನೆ ನೀಡಬೇಕು.
- ಇಂತಹ ಸಂದರ್ಭದಲ್ಲಿ ವಿಮೆ ಮಾಡಿಸಿದ ಬೆಳೆಯ ವಿವರಗಳನ್ನು, ಹಾನಿಯ ವ್ಯಾಪ್ತಿ ಹಾಗೂ ಹಾನಿಗೆ ಕಾರಣಗಳನ್ನು 72 ಗಂಟೆಗಳೊಳಗಾಗಿ ತಿಳಿಸಬೇಕು.
- ನಷ್ಟದ ಬಗೆಗಿನ ಮಾಹಿತಿಯನ್ನು ಸ್ವೀಕರಿಸಿದ ಮೇಲೆ ವಿಮಾ ಸಂಸ್ಥೆಗಳು ಬೆಳೆ ನಷ್ಟವನ್ನು ನಿರ್ಧರಿಸುವುದಕ್ಕೆ ನಷ್ಟ ನಿರ್ಧಾರಕರನ್ನು ಸಂಬಂಧಪಟ್ಟ ಪ್ರದೇಶಕ್ಕೆ 48 ಗಂಟೆಯೊಳಗಾಗಿ ನಿಯೋಜಿಸುವುದು.
- ವಿಮೆ ಸಂಸ್ಥೆಯಿಂದ ನೇಮಿಸಲ್ಪಟ್ಟ ನಷ್ಟ ನಿರ್ಧಾರಕರು ಮತ್ತು ಸ್ಥಳೀಯ ತಾಲ್ಲೂಕು/ಹೋಬಳಿ ಮಟ್ಟದ ಕೃಷಿ ಮತ್ತು ತೋಟಗಾರಿಕಾ ಇಲಾಖಾ ಅಧಿಕಾರಿಗಳು ಜಂಟಿಯಾಗಿ, ಹಾನಿಗೊಳಗಾದ ರೈತರ ಸಮ್ಮುಖದಲ್ಲಿ ಬೆಳೆ ನಷ್ಟ ನಿರ್ಧರಿಸುವುದು.
- ಸದರಿ ಬೆಳೆ ನಷ್ಟದ ವರದಿಯನ್ನು ಜಿಲ್ಲೆಗಳ ಇಲಾಖಾ ಮುಖ್ಯಸ್ಥರು ಅನುಷ್ಠಾನ ವಿಮಾ ಸಂಸ್ಥೆಗಳಿಗೆ ನೇರವಾಗಿ ಸಲ್ಲಿಸಲು ಕ್ರಮ ಕೈಗೊಳ್ಳುವುದು.

ಮುಂದುವರೆದು "Localised risks" invoke ಮಾಡಲು Para no. 21.5 of Revised Operational Guidelines ಮಾರ್ಗಸೂಚಿಗಳ ಪ್ರಮುಖ ಅಂಶಗಳನ್ನು ಗಮನದಲ್ಲಿರಿಸಿ ಕ್ರಮ ಕೈಗೊಳ್ಳಲು ಸೂಚಿಸಿದೆ.

13/08/20

ಕೃಷಿ ಆಯುಕ್ತರು

**ಪ್ರತಿಯನ್ನು ಅಭಿನಂದನೆಗಳೊಂದಿಗೆ ಸರ್ಕಾರದ ಕಾರ್ಯದರ್ಶಿಗಳು ಕೃಷಿ ಮತ್ತು ತೋಟಗಾರಿಕೆ ಇಲಾಖೆ ರವರಿಗೆ ಸಲ್ಲಿಸಿದೆ.**

**ಪ್ರತಿಯನ್ನು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ:**

1) ತೋಟಗಾರಿಕಾ ಆಯುಕ್ತರು / ನಿರ್ದೇಶಕರು, ಬೆಂಗಳೂರು.

2) ನಿರ್ದೇಶಕರು, ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ, ಬೆಂಗಳೂರು.

3) ಸಂಯೋಜಕರು, ರಾಜ್ಯ ಮಟ್ಟದ ಬ್ಯಾಂಕರ್‌ಗಳ ಸಮಿತಿ, ಬೆಂಗಳೂರು

4) ಎಲ್ಲಾ ಜಿಲ್ಲಾಧಿಕಾರಿಗಳು.

5) ಎಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್.

6) ಎಲ್ಲಾ ಜಿಲ್ಲಾ ಜಂಟಿ ಕೃಷಿ ನಿರ್ದೇಶಕರು

7) ಎಲ್ಲಾ ಜಿಲ್ಲಾ ತೋಟಗಾರಿಕಾ ಉಪ ಕೃಷಿ ನಿರ್ದೇಶಕರು

8) ಎಲ್ಲಾ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳು.

9) ಎಲ್ಲಾ ಲೀಡ್ ಬ್ಯಾಂಕುಗಳು.

10) ಎಲ್ಲಾ ಪ್ರಾದೇಶಿಕ ಗ್ರಾಮೀಣ ಬ್ಯಾಂಕುಗಳು.

11) ಎಲ್ಲಾ ನೋಡಲ್ ಬ್ಯಾಂಕುಗಳು.

12) ಎಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳು.

13) ಅನುಷ್ಠಾನ ವಿಮಾ ಸಂಸ್ಥೆಗಳು

14) ರಕ್ಷಾ ಕಡತ : ಹೆಚ್ಚುವರಿ ಪ್ರತಿ.

(ಕ್ರಮ ಸಂಖ್ಯೆ: 7 ತೋಟಗಾರಿಕಾ ಆಯುಕ್ತರು / ನಿರ್ದೇಶಕರ ಮೂಲಕ, ಕ್ರಮ ಸಂಖ್ಯೆ:8 ನಿರ್ದೇಶಕರು, ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ ಇವರ ಮೂಲಕ, ಕ್ರಮ ಸಂಖ್ಯೆ:9, 10 & 11 ರವರೆಗೆ– ಎಸ್.ಎಲ್.ಬಿ.ಸಿ. ಮೂಲಕ ಹಾಗೂ ಕ್ರಮ ಸಂಖ್ಯೆ: 12 – ಅಪೆಕ್ಸ್ ಬ್ಯಾಂಕ್ ಮೂಲಕ ಕಳುಹಿಸುವುದು).

## Reporting format for On Account Payment due to Mid Season Adversity

**Year: ________. Season:________**

| District | Taluk | Hobli | Grama panchayath | Crop | Irrigated/ Rainfed | Total Cultivated area (Ha) of the crop | Area affected (Ha) | Estimated average yield of the Hobli/GP after assesment (Kg/ha) | Estimated yield loss % of the Hobli/GP after assesment | Stage of Crop loss (1-2 months age/2-3 months age/>3 months age) | Cause of loss/adverse event | Date of adverse event |
|---|---|---|---|---|---|---|---|---|---|---|---|---|
| 1 | 2 | 3 | 4 | 5 | 6 | 7 | 8 | 9 | | 10 | 11 | 12 |
| | | | | | | | | | | | | |
| | | | | | | | | | | | | |
| | | | | | | | | | | | | |

Joint Director of Agriculture
___________ District

Insurance Company representative

Deputy Commissioner
& Chairman District Level
Joint Committee

**Note:**

1. Grama Panchayath column is applicable only for GP notified crops.
2. Crop name should be as per notification with Irrigated / Rainfed specifications.
3. Estimated yield should be Hobli/GP average after assessment due to adverse weather condition.
4. For column no. 12, mention dates in case of wet spell and week & month in case of dry spell.
5. Cause of loss/adverse event to be described briefly in the covering letter which is duly signed by the Deputy Commissioner & Chairman District Level Joint Committee.

# Reporting format for KRS-PMFBY Prevented sowing risk

**Year: ________. Season:________**

| District | Taluk | Grama Panchayath | Hobli name | Crops | Irrigated/Rainfed | Normal Area (Ha) | Area Sown (Ha) | Un Sown Area (Ha) | Germination affected Area (Ha) | Total affected area (Column 9+10) | % Area affected (= Column11/ Column7 *100) | Remarks |
|---|---|---|---|---|---|---|---|---|---|---|---|---|
| 1 | 2 | 3 | 4 | 5 | 6 | 7 | 8 | 9 | 10 | 11 | 12 | 13 |
| | | | | | | | | | | | | |
| | | | | | | | | | | | | |
| | | | | | | | | | | | | |
| | | | | | | | | | | | | |
| | | | | | | | | | | | | |

Joint Director of Agriculture
___________ District

Insurance Company representative

Deputy Commissioner
& Chairman District Level
Joint Committee